**Akashvani : Bangalore**
**Regional Bulletin In Kannada**
**20.10.2025 / 2.30 pm**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**20.10.2025 / 2.30 pm**

**<><*<><>*><>**

ಮುಖ್ಯಾಂಶಗಳು

ಮುಖ್ಯಾಂಶಗಳು :

೧. ನಾಡಿನೆಲ್ಲೆಡೆ ದೀಪಾವಳಿ ಹಬ್ಬದ ಸಂಭ್ರಮ; ಮುಖ್ಯಮಂತ್ರಿ ಸೇರಿದಂತೆ ಗಣ್ಯರಿಂದ ಶುಭಾಶಯ

೨. ರಾಜ್ಯ ಸರ್ಕಾರ ನಡೆಸುತ್ತಿರುವ ಸಾಮಾಜಿಕ, ಶೈಕ್ಷಣಿಕ ಸಮೀಕ್ಷೆ ವೈಜ್ಞಾನಿಕವಾಗಿಲ್ಲ - ಪ್ರತಿಪಕ್ಷ ನಾಯಕ ಆರ್.ಅಶೋಕ ಆರೋಪ

೩. ನವೆಂಬರ್ ೨ರಂದು ಚಿತ್ತಾಪುರದಲ್ಲಿ ಪಾದಯಾತ್ರೆ ನಡೆಸಲು ಅನುಮತಿ ಕೋರಿ ಜಿಲ್ಲಾಡಳಿತಕ್ಕೆ ಆರ್‌ಎಸ್‌ಎಸ್ ಹೊಸ ಅರ್ಜಿ

೪. ನಮ್ಮ ಮೆಟ್ರೋ ಸಂಚಾರ ಆರಂಭವಾಗಿ ಇಂದಿಗೆ ೧೪ ವರ್ಷ; ಪ್ರಯಾಣಿಕರಿಗೆ ಧನ್ಯವಾದ ತಿಳಿಸಿದ ಬಿಎಂಆರ್‌ಸಿಎಲ್

೫. ಚಿಕ್ಕಮಗಳೂರಿನಲ್ಲಿ ಬಿಂಡಿಗ ದೇವಿರಮ್ಮ ಜಾತ್ರಾ ಮಹೋತ್ಸವ ; ಸಂಜೆಯವರೆಗೆ ಬೆಟ್ಟವೇರಲು ಭಕ್ತರಿಗೆ ಅವಕಾಶ

***************

ನಾಡಿನೆಲ್ಲೆಡೆ ದೀಪಾವಳಿ ಹಬ್ಬದ ಸಂಭ್ರಮ ಮನೆಮಾಡಿದೆ. ಇಂದು ದುಷ್ಟ ಶಿಕ್ಷಣ ಶಿಷ್ಟ ರಕ್ಷಣೆಯ ಸಂಕೇತವಾಗಿರುವ ನರಕ ಚತುರ್ದಶಿ ಹಬ್ಬವನ್ನು ಆಚರಿಸಲಾಗುತ್ತಿದೆ. ಹಬ್ಬದ ಹಿನ್ನೆಲೆಯಲ್ಲಿ ರಾಜ್ಯದ ಜನತೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ ಶಿವಕುಮಾರ್ ಸೇರಿದಂತೆ ಹಲವು ಗಣ್ಯರು ನರಕ ಚತುರ್ದಶಿ ಹಾಗೂ ದೀಪಾವಳಿ ಹಬ್ಬದ ಶುಭಾಶಯ ಕೋರಿದ್ದಾರೆ. ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ

ಹಬ್ಬದ ಸಂಭ್ರಮದ ಜೊತೆಗೆ ಪರಿಸರ ಕಾಳಜಿಯನ್ನು ಮರೆಯದಿರಿ. ಹಸಿರು ಪಟಾಕಿಗಳನ್ನೇ ಬಳಸಿ ಎಂದು ಸಲಹೆ ನೀಡಿದ್ದಾರೆ. ಎಳೆ ಮಕ್ಕಳು ಪಟಾಕಿ ಸಿಡಿಸುವಾಗ ಹಿರಿಯರು ಜಾಗ್ರತೆ ವಹಿಸಿ. ದೀಪಾವಳಿಯನ್ನು ಸಂಭ್ರಮದಿಂದ ಸುರಕ್ಷಿತವಾಗಿ ಆಚರಿಸುವಂತೆ ಮನವಿ ಮಾಡಿದ್ದಾರೆ. ಉಪಮುಖ್ಯಮಂತ್ರಿ ಡಿ.ಕೆ ಶಿವಕುಮಾರ್ ಹಬ್ಬವೂ ಪ್ರತಿಯೊಬ್ಬರಿಗೂ ಶುಭವನ್ನು ಉಂಟು ಮಾಡಲಿ ಎಂದು ಹಾರೈಸಿದ್ದಾರೆ. ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ, ಈ ಹಬ್ಬವೂ ಎಲ್ಲರಿಗೂ ಶುಭವನ್ನೇ ಉಂಟು ಮಾಡಲಿ ಎಲ್ಲರ ಮನ ಮನೆಗಳಲ್ಲಿ ಬೆಳಕು ತುಂಬಲಿ ಎಂದು ಸಾಮಾಜಿಕ ಜಾಲತಾಣದಲ್ಲಿ ತಿಳಿಸಿದ್ದಾರೆ.

***************

ಬೆಳಕಿನ ಹಬ್ಬ ದೀಪಾವಳಿಯ ಸಂಭ್ರಮ ರಾಜ್ಯದೆಲ್ಲೆಡೆ ಮನೆಮಾಡಿದೆ. ನರಕ ಚತುರ್ದಶಿಯನ್ನು ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಇಂದು ಸಡಗರ ಸಂಭ್ರಮದಿಂದ ಆಚರಿಸಲಾಗುತ್ತಿದೆ. ಪಾರಂಪರಿಕವಾಗಿ ಆಚರಿಸುವ ದೀಪಾವಳಿಯ ನೋಮು ಆಚರಣೆಯನ್ನು ಶ್ರದ್ಧಾ ಭಕ್ತಿಗಳಿಂದ ಆಚರಿಸಲಾಗುತ್ತಿದ್ದು, ಇಂದು ನೀರು ತುಂಬುವ ಆಚರಣೆ ಮಾಡಲಾಯಿತು. ಬೆಳಗಿನ ಸಮಯದಲ್ಲಿ ನಿಶ್ಯಬ್ಧ ವಲಯಗಳೆಂದು ಘೋಷಿಸಲ್ಪಟ್ಟಿರುವ ಆಸ್ಪತ್ರೆ, ಶಾಲೆ, ಪ್ರಾರ್ಥನಾ ಮಂದಿರ ಇತ್ಯಾದಿಗಳ ಸುತ್ತಮುತ್ತಲಿನ ಪ್ರದೇಶದಲ್ಲಿ ಯಾವುದೇ ರೀತಿಯ ಶಬ್ಧ ಉಂಟು ಮಾಡುವ ನಿಷೇಧಿತ ಪಟಾಕಿಗಳನ್ನು ಬಳಸಬಾರದು. ಹಸಿರು ಪಟಾಕಿಗಳನ್ನು ಮಾತ್ರ ಉಪಯೋಗಿಸುವಂತೆ ಆದೇಶಿಸಲಾಗಿದೆ ಎಂದು ಜಿಲ್ಲಾಧಿಕಾರಿ ಎ.ಬಿ.ಬಸವರಾಜು ತಿಳಿಸಿದ್ದಾರೆ. ಕೋಲಾರ ಜಿಲ್ಲೆಯಾದ್ಯಂತ ದೀಪಾವಳಿ ಹಬ್ಬವನ್ನು ಸಡಗರ ಸಂಭ್ರಮ ಹಾಗೂ ಶ್ರದ್ಧಾಭಕ್ತಿಯಿಂದ ಆಚರಿಸಲಾಗುತ್ತಿದೆ. ರಾಖಿ ಹಬ್ಬದ ಮಾದರಿಯಲ್ಲಿ ದೀಪಾವಳಿ ಹಬ್ಬದಲ್ಲಿ ಬಣ್ಣ ಬಣ್ಣದ ನೋಮುದಾರ ಕೈಗೆ ಕಟ್ಟಿಕೊಳ್ಳುವ ಸಂಪ್ರದಾಯ ಈ ಭಾಗದಲ್ಲಿದೆ.

***************

ಪ್ರಧಾನಿ ನರೇಂದ್ರ ಮೋದಿ ಗೋವಾ ಮತ್ತು ಕಾರವಾರ ಕರಾವಳಿಯಲ್ಲಿ ಐಎನ್‌ಎಸ್ ವಿಕ್ರಾಂತ್ ನೌಕಾಪಡೆಯ ಸಿಬ್ಬಂದಿಯೊಂದಿಗೆ ಇಂದು ದೀಪಾವಳಿ ಆಚರಿಸಿದರು. ಈ ವೇಳೆ ಮಾತನಾಡಿದ ಅವರು ಭಾರತದ ರಕ್ಷಣಾ ಪಡೆಗಳ ನಡುವಿನ ಅಸಾಧಾರಣ ಸಮನ್ವಯವು ಆಪರೇಷನ್

ಸಿಂಧೂರ್ ಸಮಯದಲ್ಲಿ ಪಾಕಿಸ್ತಾನವನ್ನು ಶರಣಾಗುವಂತೆ ಮಾಡಿತು ಎಂದು ತಿಳಿಸಿದ್ದಾರೆ. ಇದೇ ವೇಳೆ ದೇಶದ ಜನತೆಗೆ ದೀಪಾವಳಿಯ ಶುಭಾಶಯ ಕೋರಿದ್ದಾರೆ.

***************

ರಾಜ್ಯ ಸರ್ಕಾರ ಕೈಗೊಂಡಿರುವ ಸಾಮಾಜಿಕ, ಶೈಕ್ಷಣಿಕ ಸಮೀಕ್ಷೆ ವೈಜ್ಞಾನಿಕವಾಗಿಲ್ಲ ಎಂದು ಪ್ರತಿಪಕ್ಷ ನಾಯಕ ಆರ್.ಅಶೋಕ ಆರೋಪಿಸಿದ್ದಾರೆ. ಹಾಸನದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಹಲವರ ವಿರೋಧದ ನಡುವೆ ರಾಜ್ಯ ಸರ್ಕಾರ ಜಾತಿ ಜನಗಣತಿ ಮಾಡಲು ಮುಂದಾಗಿದೆ ಎಂದು ದೂರಿದ್ದಾರೆ. ಶಾಲಾ ಕಾಲೇಜುಗಳಿಗೆ ರಜೆ ಇರುವ ಹಿನ್ನೆಲೆಯಲ್ಲಿ ಪೋಷಕರು ಮಕ್ಕಳೊಂದಿಗೆ ಪ್ರವಾಸಕ್ಕೆ ತೆರಳಿದ್ದು, ಸರ್ಕಾರ ಜನರಿಂದ ಮಾಹಿತಿ ಸಂಗ್ರಹಿಸಲು ಸಾಧ್ಯವೇ ಎಂದು ಪ್ರಶ್ನಿಸಿದ್ದಾರೆ. ಸರ್ಕಾರದ ನಿರ್ಲಕ್ಷ್ಯದಿಂದ ಕೋಟ್ಯಾಂತರ ರೂಪಾಯಿಗಳ ಹೂಡಿಕೆ ಇತರೆ ರಾಜ್ಯಗಳ ಪಾಲಾಗಿದೆ. ಈ ಮೂಲಕ ಸರ್ಕಾರ ಲಕ್ಷಾಂತರ ಜನರ ಉದ್ಯೋಗ ಕಸಿದುಕೊಂಡಿದೆ ಎಂದು ಆರೋಪಿಸಿದ್ದಾರೆ.

**ಧ್ವನಿ : ಆರ್. ಅಶೋಕ, ಪ್ರತಿಪಕ್ಷ ನಾಯಕ ( 29 ಸೆಕೆಂಡುಗಳು)**

***************

ಹೈಕೋರ್ಟ್ ನಿರ್ದೇಶನದ ಬಳಿಕ ನವಂಬರ್ ೨ರಂದು ಕಲಬುರ್ಗಿಯ ಚಿತ್ತಾಪುರದಲ್ಲಿ ಶತಮಾನೋತ್ಸವ ಪಾದಯಾತ್ರೆ ನಡೆಸಲು ಅನುಮತಿ ಕೋರಿ ರಾಷ್ಟ್ರೀಯ ಸ್ವಯಂ ಸೇವಾ ಸಂಘ ಕಲಬುರ್ಗಿ ಜಿಲ್ಲಾಧಿಕಾರಿಗೆ ಹೊಸ ಅರ್ಜಿ ಸಲ್ಲಿಸಿದೆ. ಜಿಲ್ಲಾಧಿಕಾರಿ ಲಭ್ಯವಿಲ್ಲದ ಹಿನ್ನೆಲೆಯಲ್ಲಿ ನಿಯೋಗವು ವೈಯಕ್ತಿಕವಾಗಿ ಅರ್ಜಿ ಸಲ್ಲಿಸಲು ಸಾಧ್ಯವಾಗದ ಹಿನ್ನೆಲೆಯಲ್ಲಿ ಇಮೇಲ್ ಮತ್ತು ವಾಟ್ಸಪ್ ಮೂಲಕ ಅರ್ಜಿ ಸಲ್ಲಿಸಿದೆ. ನವೆಂಬರ್ ೨ ರಂದು ಪಾದಯಾತ್ರೆ ನಡೆಸಲು ಅನುಮತಿ ಕೋರಿ ಕಲಬುರ್ಗಿ ನ್ಯಾಯಾಲಯದ ಪೀಠವು ಹೊಸ ಅರ್ಜಿ ಸಲ್ಲಿಸುವಂತೆ ತಮಗೆ ನಿರ್ದೇಶಿಸಿದೆ ಎಂದು ಆರ್‌ಎಸ್‌ಎಸ್ ಹಿರಿಯ ಕಾರ್ಯಕಾರಿ ಅಶೋಕ್ ವಿ ಪಾಟೀಲ್ ಔಪಚಾರಿಕ ಅರ್ಜಿಯಲ್ಲಿ ತಿಳಿಸಿದ್ದಾರೆ.

***************

ನಮ್ಮ ಮೆಟ್ರೊ ಸಂಚಾರ ಆರಂಭವಾಗಿ ಇಂದಿಗೆ ೧೪ ವರ್ಷ ಪೂರ್ಣವಾಗುತ್ತಿದೆ. ದೇಶದ ಎರಡನೇ ಅತಿ ಉದ್ದದ ಮೆಟ್ರೋ ಎನ್ನುವ ಹೆಗ್ಗಳಿಕೆಗೆ ನಮ್ಮ ಮೆಟ್ರೋ ಪಾತ್ರವಾಗಿದೆ. ೨೦೧೧ ಅಕ್ಟೋಬರ್ ೨೦ರಂದು ಬೈಯಪ್ಪನಹಳ್ಳಿ ಮತ್ತು ಎಂ.ಜಿ. ರಸ್ತೆ ನಡುವಿನ ಸಂಚಾರ ಸಾರ್ವಜನಿಕ ಪ್ರಯಾಣಕ್ಕೆ ಮುಕ್ತವಾಗಿತ್ತು. ೬.೭ ಕಿಲೋ ಮೀಟರ್ ಮಾರ್ಗದಲ್ಲಿ ಮೆಟ್ರೋ ಪ್ರಯಾಣ ಮೊದಲ ಬಾರಿಗೆ ಸಾಗಿತ್ತು. ಕ್ರಮೇಣ ಮೆಟ್ರೋ ತನ್ನ ಜಾಲವನ್ನು ವಿಸ್ತರಿಸುತ್ತಾ ಹೋಯಿತು. ಇದೇ ವೇಳೆ ನಮ್ಮ ಮೆಟ್ರೋ ಜೊತೆಗೆ ೧೪ ವರ್ಷಗಳ ಅಧ್ಬುತ ಪ್ರಯಾಣದಲ್ಲಿ ಭಾಗವಹಿಸಿದ ಎಲ್ಲಾ ಪ್ರಯಾಣಿಕರಿಗೆ ನಮ್ಮ ಮೆಟ್ರೋ ಧನ್ಯವಾದ ತಿಳಿಸಿದೆ.

***************

ಕಿತ್ತೂರು ಉತ್ಸವದ ಅಂಗವಾಗಿ ರಾಜ್ಯದಾದ್ಯಂತ ಸಂಚರಿಸುತ್ತಿರುವ ವೀರಜ್ಯೋತಿಯನ್ನು ಬೆಳಗಾವಿಯಲ್ಲಿ ಇಂದು ಬರಮಾಡಿಕೊಳ್ಳಲಾಯಿತು. ಖಾನಾಪುರ ತಾಲ್ಲೂಕಿನ ನಂದಗಡ ಮೂಲಕ ಬೆಳಗಾವಿ ನಗರವನ್ನು ಪ್ರವೇಶಿಸಿದ ಜ್ಯೋತಿಯನ್ನು ಮಹಾಪೌರರ ಮಂಗೇಶ್ ಪವಾರ್ ಕಿತ್ತೂರು ಚೆನ್ನಮ್ಮ ವೃತ್ತದಲ್ಲಿ ಪೂಜೆ ಸಲ್ಲಿಸಿ ಬರಮಾಡಿಕೊಂಡರು. ಕಲಾತಂಡಗಳ ಜತೆ ನಗರದ ಪ್ರಮುಖ ಬೀದಿಗಳಲ್ಲಿ ಸಂಚರಿಸಿದ ಜ್ಯೋತಿಯು ಕಾಕತಿಗೆ ತೆರಳಿತು. ಕಾಕತಿಯಿಂದ, ಹಿರೇ ಬಾಗೇವಾಡಿ, ಚಿಕ್ಕ ಬಾಗೇವಾಡಿ, ತಿಗಡಿ, ಮರೀಕಟ್ಟಿ, ಸಂಪಗಾಂವ ಮತ್ತಿತರ ಗ್ರಾಮಗಳ ಮೂಲಕ ಬೈಲಹೊಂಗಲಕ್ಕೆ ತೆರಳಲಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯನವರು ಅಕ್ಟೋಬರ್.೯ ರಂದು ಬೆಂಗಳೂರಿನ ವಿಧಾನಸೌಧದ ಬಳಿ ಜ್ಯೋತಿಯಾತ್ರೆಗೆ ಚಾಲನೆ ನೀಡಿದ್ದರು. ಅಕ್ಟೋಬರ್ ೨೩ ರಂದು ಜ್ಯೋತಿಯು ಕಿತ್ತೂರು ತಲುಪಲಿದೆ.

***************

ಚಿಕ್ಕಮಗಳೂರು ಜಿಲ್ಲೆಯ ಬಿಂಡಿಗ ದೇವಿರಮ್ಮ ಬೆಟ್ಟದಲ್ಲಿ ವರ್ಷಕೊಮ್ಮೆ ದೀಪಾವಳಿ ಸಂದರ್ಭದಲ್ಲಿ ಮಾತ್ರ ದರ್ಶನ ನೀಡುವ ದೇವಿರಮ್ಮ ದೇವಿಯ ಜಾತ್ರಾ ಮಹೋತ್ಸವ ಅದ್ದೂರಿಯಾಗಿ ನಡೆಯುತ್ತಿದೆ. ನಿನ್ನೆ ಮತ್ತು ಇಂದು ಸಾವಿರಾರು ಭಕ್ತರು ಬೆಟ್ಟವೇರಿ ದರ್ಶನ ಪಡೆಯುತ್ತಿದ್ದಾರೆ.

ಈ ಭಾಗದಲ್ಲಿ ಬೀಳುತ್ತಿರುವ ಮಳೆಯ ನಡುವೆ ಅಂದಾಜು ೮೦ ಸಾವಿರಕ್ಕೂ ಅಧಿಕ ಭಕ್ತರು ದರ್ಶನ ಪಡೆದಿದ್ದಾರೆ. ಇಂದು ಸಂಜೆವರೆಗೆ ಬೆಟ್ಟದ ಮೇಲೆ ದೇವಿ ದರ್ಶನಕ್ಕೆ ಅವಕಾಶ

ಕಲ್ಪಿಸಲಾಗಿದೆ. ಇನ್ನು ಮೂರು ದಿನಗಳ ಕಾಲ ಬೆಟ್ಟದ ತಪ್ಪಲಿನಲ್ಲಿರುವ ಬಿಂಡಿಗ ದೇವಾಲಯದಲ್ಲಿ ದೀಪಾವಳಿಯ ವಿಶೇಷವಾಗಿ ಪೂಜೆ, ಹೋಮ, ಬಾಗಿಲು ತೆರೆಯುವ ಶಾಸ್ತ್ರ, ಕೆಂಡಾರ್ಚನೆ. ಸೇರಿ ಹಲವು ಧಾರ್ಮಿಕ ಕಾರ್ಯಕ್ರಮಗಳು ನಡೆಯಲಿವೆ. ಜಾತ್ರೆ ಹಿನ್ನಲೆಯಲ್ಲಿ ಚಿಕ್ಕಮಗಳೂರು, ಮಲ್ಲೇನಹಳ್ಳಿ, ಬಿಂಡಿಗ ಗ್ರಾಮ ಸೇರಿದಂತೆ ಹಲವೆಡೆ ಬಿಗಿ ಪೊಲೀಸ್ ಭದ್ರತೆ ಕೈಗೊಳ್ಳಲಾಗಿದೆ.

***************

ರಾಜ್ಯದ ಹಲವೆಡೆ ಮಳೆ ಮುಂದುವರೆದಿದೆ. ದಾವಣಗೆರೆ ಜಿಲ್ಲೆಯಾದ್ಯಂತ ಕಳೆದ ರಾತ್ರಿ ಸಿಡಿಲು ಸಹಿತ ವ್ಯಾಪಕ ಮಳೆಯಾಗಿದ್ದು ಜನ ಜೀವನ ಬಾಧಿತಗೊಂಡಿದೆ. ಧಾರಾಕಾರ ಮಳೆಯಿಂದಾಗಿ ನಗರದ ತಗ್ಗು ಪ್ರದೇಶದ ಮನೆಗಳಿಗೆ ನೀರು ನುಗ್ಗಿದ್ದು, ಗ್ರಾಮೀಣ ಭಾಗದಲ್ಲಿ ಮೆಕ್ಕೆಜೋಳ ಮತ್ತು ಅಡಿಕೆ ಕೊಯ್ಲಿಗೆ ಅಡ್ಡಿ ಉಂಟಾಗಿದೆ. ದಾವಣಗೆರೆ ತಾಲ್ಲೂಕಿನ ಬಾಡಾ, ಅಣಬೇರು, ಜರೀಕಟ್ಟೆ ಗ್ರಾಮಗಳಲ್ಲಿ ಭತ್ತದ ಗದ್ದೆ ಹಾಗೂ ತರಕಾರಿ ಬೆಳೆದ ಜಮೀನುಗಳಲ್ಲಿ ನೀರು ನಿಂತಿದ್ದು, ತರಕಾರಿ ಕೊಳೆತು ಹೋಗುವ ಆತಂಕ ರೈತರನ್ನು ಕಾಡುತ್ತಿದೆ. ಕೋಲಾರ ನಗರದಲ್ಲಿ ನಿನ್ನೆ ಸುರಿದ ಮಳೆಯಿಂದ ನಗರದ ಉದ್ಯಾನವನಗಳೆಲ್ಲಾ ಮಳೆಯಿಂದ ಅವೃತ್ತವಾಗಿವೆ. ಕುವೆಂಪು ಪಾರ್ಕ್ ಪಕ್ಕದಲ್ಲಿರುವ ಚರಂಡಿಯಲ್ಲಿ ಹೂಳು ನೀರು ಸರಾಗವಾಗಿ ಹರಿಯಲು ಅವಕಾಶ ಇಲ್ಲದ ಕಾರಣ ಕೊಳಚೆ ನೀರಿನ ಗುಂಡಿಯಾಗಿ ಪರಿವರ್ತನೆಯಾಗಿದೆ. ಕೆಲವೆಡೆ ತೋಟಗಾರಿಕೆ ಬೆಳೆಗಳಲ್ಲೂ ನೀರು ನಿಂತಿದ್ದು, ಹೂ, ಟೊಮೊಟೋ, ಹೂಕೋಸು ಬೆಳೆದಿರುವ ರೈತರು ಆತಂಕಕ್ಕೀಡಾಗಿದ್ದಾರೆ.

***************